41

**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಡಾ: Y.A. ನಾರಾಯಣಸ್ವಾಮಿ ಇವರು ನಿಯಮ 72 ರಡಿಯಲ್ಲಿ ಪ್ರಸ್ತಾಪಿಸಿರುವ ಸೂಚನೆ.**

**ವಿಷಯ**

ಕರ್ನಾಟಕ ರಾಜ್ಯದಲ್ಲಿ ಸುಮಾರು 430 ಕ್ಕೂ ಹೆಚ್ಚು ಸರ್ಕಾರಿ ಪದವಿ ಕಾಲೇಜುಗಳಿದ್ದು, ಸದರಿ ಕಾಲೇಜುಗಳಲ್ಲಿ ಯಾರೊಬ್ಬರೂ ಖಾಯಂ ಪ್ರಾಂಶುಪಾಲರು ಇರುವುದಿಲ್ಲ. ಕಳೆದ 12 ವರ್ಷಗಳಿಂದಲೂ ಪ್ರಾಂಶುಪಾಲರ ಹುದ್ದೆಗಳಿಗೆ ಬಡ್ತಿ ನೀಡದೇ ಇರುವುದರಿಂದ, ಕಾಲೇಜುಗಳಲ್ಲಿನ ಆಡಳಿತ ಮತ್ತು ಶೈಕ್ಷಣಿಕ ಪ್ರಗತಿ ಕುಂಠಿತವಾಗುತ್ತಿದ್ದು ಹಾಗೂ ಅರ್ಹತೆ ಇರುವ ಬಹಳ ಪ್ರಾಧ್ಯಾಪಕರು ಬಡ್ತಿಯಿಂದ ವಂಚಿತರಾಗುತ್ತಿದ್ದು, ಪ್ರಾಂಶುಪಾಲರ ಬಡ್ತಿ ಪ್ರಕ್ರಿಯೆ ಬಗ್ಗೆ.

**<u>ಉತ್ತರ</u>**

- ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಒಟ್ಟು 440 ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳು ಕಾರ್ಯ ನಿರ್ವಹಿಸುತ್ತಿವೆ. ಸದರಿ 440 ಕಾಲೇಜುಗಳ ಪೈಕಿ 412 ಪ್ರಾಂಶುಪಾಲರ ಹುದ್ದೆಗಳು ಮಂಜೂರಾಗಿದ್ದು, ಉಳಿದ 28 ಕಾಲೇಜುಗಳಿಗೆ ಹುದ್ದೆ ಮಂಜೂರಾಗಿರುವುದಿಲ್ಲ. ಮಂಜೂರಾದ 412 ಪ್ರಾಂಶುಪಾಲರ ಹುದ್ದೆಗಳು ಪ್ರಸ್ತುತ ಖಾಲಿ ಇರುತ್ತವೆ.
- ಪ್ರಾಂಶುಪಾಲರ ಹುದ್ದೆಗಳ ಭರ್ತಿಗೆ ಸಂಬಂಧಿಸಿದಂತೆ, ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ/91/ಡಿಸಿಇ/ 2004, ದಿನಾಂಕ:25.09.2009 ರಲ್ಲಿ ಪರಿಷ್ಕೃತ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಜಾರಿಗೊಳಿಸಲಾಗಿದ್ದು, ಸದರಿ ನಿಯಮಗಳಲ್ಲಿ ಪ್ರಾಂಶುಪಾಲರ ಹುದ್ದೆಗಳನ್ನು ಯು.ಜಿ.ಸಿ. ನಿಯಮಗಳನ್ವಯ ಶೇಕಡ 100 ರಷ್ಟು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಆದೇಶಿಸಲಾಗಿದೆ.
- ಕಾಲೇಜು ಶಿಕ್ಷಣ ಇಲಾಖೆಯಲ್ಲಿ 2006 ರ ಯು.ಜಿ.ಸಿ. ಪರಿಷ್ಕೃತ ವೇತನ ಶ್ರೇಣಿಗಳನ್ನು ಅಳವಡಿಸಿ ಅನುಷ್ಠಾನಗೊಳಿಸಲು ಸರ್ಕಾರವು ಹೊರಡಿಸಿರುವ ಅಧಿಸೂಚನೆ ಸಂಖ್ಯೆ:ಇಡಿ/37/ ಯುಎನ್‌ಇ/2009, ದಿನಾಂಕ:24.12.2009 ರಲ್ಲಿಯೂ ಸಹ ಪ್ರಾಂಶುಪಾಲರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಆದೇಶಿಸಲಾಗಿದೆ.
- ಅಲ್ಲದೆ, ಪ್ರಸ್ತುತ ಜಾರಿಯಲ್ಲಿರುವ 2018 ರ ಯು.ಜಿ.ಸಿ. ನಿಯಮಾವಳಿಗಳಲ್ಲಿ ಪ್ರಾಂಶುಪಾಲರ ಹುದ್ದೆಯನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಅವಕಾಶ ಕಲ್ಪಿಸಲಾಗಿದೆ.

  ಈ ಮೇಲಿನ ಅಂಶಗಳ ಹಿನ್ನೆಲೆಯಲ್ಲಿ ಪ್ರಾಂಶುಪಾಲರ ಹುದ್ದೆಗೆ ಬಡ್ತಿ ನೀಡಲು ಅವಕಾಶ ಇರುವುದಿಲ್ಲ.

- ಕಾಲೇಜು ಶಿಕ್ಷಣ ಇಲಾಖೆಗೆ ಮಂಜೂರಾದ ಒಟ್ಟು 412 ಪ್ರಾಂಶುಪಾಲರ ಹುದ್ದೆಗಳಲ್ಲಿ 310 ಹುದ್ದೆಗಳನ್ನು ಭರ್ತಿ ಮಾಡಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ವಹಿಸಲಾಗಿದೆ.
- ಉಳಿದ, ಮಂಜೂರಾಗಿರುವ 102 ಪ್ರಾಂಶುಪಾಲರ ಹುದ್ದೆಗಳು ಹಾಗೂ ಮಂಜೂರಾಗದೇ ಇರುವ ಹೆಚ್ಚುವರಿಯಾಗಿ ಅವಶ್ಯವಿರುವ 28 ಪ್ರಾಂಶುಪಾಲರ ಹುದ್ದೆಗಳನ್ನು ಮಂಜೂರು ಮಾಡಿ, ಒಟ್ಟು 130 ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳುವ ಪ್ರಸ್ತಾವನೆಯನ್ನು ಪರಿಶೀಲಿಸಲಾಗುತ್ತಿದೆ.
- ಮುಂದುವರೆದು, ಕಾಲೇಜಿನ ಶೈಕ್ಷಣಿಕ ಹಾಗೂ ಆಡಳಿತಾತ್ಮಕ ಹಿತದೃಷ್ಟಿಯಿಂದ ಎಲ್ಲಾ 440 ಸರ್ಕಾರಿ ಪದವಿ ಕಾಲೇಜುಗಳಲ್ಲಿ ಜೇಷ್ಠತೆಯಲ್ಲಿ ಹಿರಿಯರಾದ ಸಹ/ಸಹಾಯಕ ಪ್ರಾಧ್ಯಾಪಕರಿಗೆ ಪ್ರಾಂಶುಪಾಲರ ಕಾರ್ಯವನ್ನು ನಿರ್ವಹಿಸಲು ಸೂಚಿಸಲಾಗಿದ್ದು, ಆ ಮೂಲಕ ಕಾಲೇಜಿನ ಆಡಳಿತ ಮತ್ತು ಶೈಕ್ಷಣಿಕ ಪ್ರಗತಿಗೆ ತೊಂದರೆಯಾಗದಂತೆ ಕ್ರಮವಹಿಸಲಾಗಿದೆ.

ಇಡಿ 164 ಡಿಸಿಇ 2023

(ಡಾ: ಎಂ.ಸಿ. ಸುಧಾಕರ್)
ಉನ್ನತ ಶಿಕ್ಷಣ ಸಚಿವರು